# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಎಂ.ಎಸ್.ಲಕ್ಷ್ಮೇಶ್ವರ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬಾಳೇಹೊಸೂರು ಗ್ರಾಮ ಪಂಚಾಯತಿ, ಶಿರಹಟ್ಟಿ ತಾಲ್ಲೂಕು, ಗದಗ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:** ನಿಬಂಧಕರು, ಎ.ಆರ್.ಎಲ್.ಓ.–1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. Compt/Uplok/BGM/963/2014/ARLO-1, ದಿ:31.08.2016

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿನ ನಿಬಂಧಕರು, ಎ.ಆರ್.ಎಲ್.ಓ.–1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು–1 ರವರು ದಿನಾಂಕ: 27.08.2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಫಕೀರೇಶ್ ಬಿನ್ ಹನುಮಪ್ಪ ಸಾಲಿ, ಬಾಳೇಹೊಸೂರು ಗ್ರಾಮ, ಶಿರಹಟ್ಟಿ ತಾಲ್ಲೂಕು, ಗದಗ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು, ಶ್ರೀ ಎಂ.ಎಸ್.ಲಕ್ಷ್ಮೇಶ್ವರ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬಾಳೇಹೊಸೂರು ಗ್ರಾಮ ಪಂಚಾಯತಿ, ಶಿರಹಟ್ಟಿ ತಾಲ್ಲೂಕು, ಗದಗ ಜಿಲ್ಲೆ ಹಾಗೂ ಇತರ ಅಧಿಕಾರಿ ಮತ್ತು ನೌಕರರುಗಳ ವಿರುದ್ಧ ದೂರು ನೀಡಿದ್ದು, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರ ಅಡಿಯಲ್ಲಿ ತನಿಖೆ ಕೈಗೊಂಡಿದ್ದು, ತಹಶೀಲ್ದಾರರ ವರದಿಯಂತೆ 1985–86 ರ ನಂತರದಲ್ಲಿ ಸದರಿ ಗ್ರಾಮದ ಆಸ್ತಿ 223 ರಲ್ಲಿ ಆಸ್ತಿ ಸಂಖ್ಯೆ 223/1 ಜೋಕುಮಾರ್ ಕೆರೆ ಅಂದಾಜು 2 ಹೆಕ್ಟೇರ್ ಎಂದು ದಾಖಲಿಸಿದ್ದನ್ನು ಗ್ರಾಮಸಭೆಯ ಠರಾವು ಪಾಸು ಮಾಡುವುದರ ಮೂಲಕ ತೆಗೆದು ಹಾಕಿ, ಸದರಿ 223 ರ ಆಸ್ತಿಯು ಶ್ರೀ ಜಗದ್ಗುರು ದಿಂಗಾಲೇಶ್ವರ ಸಂಸ್ಥಾನ ಮಠ ಎಂದು ಖಾತಾ ಬದಲಾವಣೆ ಮಾಡಿರುವ ಆರೋಪದ ಹಿನ್ನೆಲೆಯಲ್ಲಿ, ತನಿಖಾ ವರದಿಯ ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ ಎದುರುದಾರ ರವರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ, ಶ್ರೀ ಎಂ.ಎಸ್.ಲಕ್ಷ್ಮೇಶ್ವರ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬಾಳೇಹೊಸೂರು ಗ್ರಾಮ ಪಂಚಾಯತಿ, ಶಿರಹಟ್ಟಿ ತಾಲ್ಲೂಕು, ಗದಗ ಜಿಲ್ಲೆ ಇವರು ದಿನಾಂಕ 30.04.2014 ರಂದು ನಿವೃತ್ತರಾಗಿರುವುದರಿಂ, ಸದರಿಯವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) ರ ಅನ್ವಯ ದುರ್ನಡತೆ/ ದುರ್ವರ್ತನೆ ಕಂಡು ಬರುವುದರಿಂದ, ಎದುರುದಾರ–1 ರವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14–ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಕ್ರಮ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ, ಶ್ರೀ ಎಂ.ಎಸ್.ಲಕ್ಷ್ಮೇಶ್ವರ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬಾಳೇಹೊಸೂರು ಗ್ರಾಮ ಪಂಚಾಯತಿ, ಶಿರಹಟ್ಟಿ ತಾಲ್ಲೂಕು, ಗದಗ ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214(2)(ಬಿ)(i) ರನ್ವಯ ಇಲಾಖಾ ವಿಚಾರಣೆಗೆ ಅನುಮತಿ ನೀಡಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14–ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 874 ಗ್ರಾಪಂಕಾ 2016, ಬೆಂಗಳೂರು, ದಿನಾಂಕ: 21.12.2016**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಎಂ.ಎಸ್.ಲಕ್ಷ್ಮೇಶ್ವರ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬಾಳೇಹೊಸೂರು ಗ್ರಾಮ ಪಂಚಾಯತಿ, ಶಿರಹಟ್ಟಿ ತಾಲ್ಲೂಕು, ಗದಗ ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214(2)(ಬಿ)(i) ರನ್ವಯ ಇಲಾಖಾ ವಿಚಾರಣೆಗೆ ಅನುಮತಿ ನೀಡಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214(2)(ಬಿ)(i) ರಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ.ಅರುಣ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ-1 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು ಎ.ಆರ್.ಎಲ್.ಓ.-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ(ಸೇವೆಗಳು-3), ಬಹುಮಹಡಿಗಳ ಕಟ್ಟಡ, ಬೆಂಗಳೂರು.
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಗದಗ ಜಿಲ್ಲಾ ಪಂಚಾಯತಿ, ಗದಗ.
6) ಕಾರ್ಯನಿರ್ವಾಹಕ ಅಧಿಕಾರಿ, ಶಿರಹಟ್ಟಿ ತಾಲ್ಲೂಕು ಪಂಚಾಯತಿ, ಶಿರಹಟ್ಟಿ, ಗದಗ ಜಿಲ್ಲೆ. (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
7) ಶ್ರೀ ಎಂ.ಎಸ್.ಲಕ್ಷ್ಮೇಶ್ವರ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬಾಳೇಹೊಸೂರು ಗ್ರಾಮ ಪಂಚಾಯತಿ, ಶಿರಹಟ್ಟಿ ತಾಲ್ಲೂಕು, ಗದಗ ಜಿಲ್ಲೆ.
8) ಗಣಕಕೋಶ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ. – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.